# ಕರ್ನಾಟಕ ವಿಧಾನ ಪರಿಷತ್ತು
## 146ನೇ ಅಧಿವೇಶನ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : **2411 (2862)**

ಸದಸ್ಯರ ಹೆಸರು : **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)**

ಉತ್ತರಿಸುವ ದಿನಾಂಕ : 30-03-2022

ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಲೋಕೋಪಯೋಗಿ ಇಲಾಖೆಯವರು ತಾಲ್ಲೂಕು ವ್ಯಾಪ್ತಿಯಲ್ಲಿರುವ ರಸ್ತೆಗಳನ್ನು ಅಭಿವೃದ್ಧಿ ಪಡಿಸದಿರುವುದರಿಂದ ರಸ್ತೆಗಳು ತೀರಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಲೋಕೋಪಯೋಗಿ ಇಲಾಖೆಗೆ ಒದಗಿಸಲಾಗುವ ಅನುದಾನದಲ್ಲಿ ಜಿಲ್ಲಾ ಮುಖ್ಯ ರಸ್ತೆ ಹಾಗೂ ರಾಜ್ಯ ಹೆದ್ದಾರಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆ ಆಧರಿಸಿ ಕೈಗೊಂಡು ಅಭಿವೃದ್ಧಿ ಪಡಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ರಸ್ತೆಗಳನ್ನು ದುರಸ್ತಿಪಡಿಸಲಾಗುವುದು; | |
| ಇ) | ಲೋಕೋಪಯೋಗಿ ಇಲಾಖೆಯಡಿಯಲ್ಲಿ ಎಲ್.ಓ.ಸಿ ನೀಡುವಲ್ಲಿ ಬಹಳ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಲೋಕೋಪಯೋಗಿ ಇಲಾಖೆಗೆ ಆಯವ್ಯಯದಲ್ಲಿ ಹಾಗೂ ಪೂರಕ ಅಂದಾಜುಗಳಲ್ಲಿ ಒದಗಿಸಲಾಗುವ ಅನುದಾನವನ್ನು ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗುವ ಆರ್ಥಿಕ ಅಧಿಕಾರದಂತೆ ಬಾಕಿ ಬಿಲ್ಲುಗಳ ತಿರುವಳಿಗೆ ಬಿಡುಗಡೆ ಮಾಡಲಾಗುತ್ತಿದೆ. ಫೆಬ್ರುವರಿ 2022ರ ಅಂತ್ಯಕ್ಕೆ ರೂ.6863.00 ಕೋಟಿ ಮೊತ್ತದ ಬಿಲ್ಲುಗಳು ಪಾವತಿಸಲು ಬಾಕಿ ಇರುತ್ತವೆ. |
| ಈ | ಬಂದಿದ್ದಲ್ಲಿ, ಎಷ್ಟು ಕಾಮಗಾರಿಗಳಿಗೆ, ಎಷ್ಟು ಮೊತ್ತದ ಎಲ್.ಓ.ಸಿ ನೀಡಬೇಕಾಗಿದೆ? | |

ಸಂ:ಲೋಇ/451/ಐಎಫ್ಎ/2022 (ಇ-ಕಛೇರಿ)

**(ಸಿ.ಸಿ. ಪಾಟೀಲ)**
ಲೋಕೋಪಯೋಗಿ ಸಚಿವರು